**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.213/2020**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿ ನಂ.1ಃ ಅಶೋಕ ತಂದೆ ವೆಂಕಟಪ್ಪಾ ಮುನ್ನೂರ
ವಃ 20 ವರ್ಷ, ಉಃ ಒಕ್ಕಲುತನ
ಸಾಃ ದುಗನೂರ ಗ್ರಾಮ, ತಾಃ ಸೇಡಂ .

2 ಆಶಮ್ಮಾ ಗಂಡ ವೆಂಕಟಪ್ಪಾ ಮುನ್ನೂರ
ವಃ 45 ವರ್ಷ, ಉಃ ಮನೆ ಕೆಲಸ
ಸಾಃ ದುಗನೂರ ಗ್ರಾಮ,
ತಾಃ ಸೇಡಂ.

----

**ದೋಷಾರೋಪಣೆ**

ನಾನು ಶ್ರೀ ಬಾಲು, ಬಿ.ಎ., ಎಲ್‌ಎಲ್‌ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 18-12-2019 ರಂದು ಬೆಳಿಗ್ಗೆ 08.00 ಗಂಟೆಯ ಸುಮಾರಿಗೆ ಸೇಡಂ ಪೋಲಿಸ ಠಾಣಾ ವ್ಯಾಪ್ತಿಯಲ್ಲಿ ಬರುವ ದುಗನೂರ ಗ್ರಾಮದ ಆರೋಪಿತರ ಮನೆಯ ಮುಂದುಗಡೆ ಸಾರ್ವಜನಿಕ ರಸ್ತೆಯಲ್ಲಿ ಚಾಸಾ 1 ನೇದ್ದವರು ತಮ್ಮ ಮನೆಯಿಂದ ಮೋಟಾರ ಸೈಕಲ ಮೇಲೆ ದುಗನೂರ ಗ್ರಾಮದ ಗೇಟ ಕಡೆಗೆ ಹೋಗುತ್ತಿದ್ದಾಗ ಆರೋಪಿ 1 ಮತ್ತು 2 ನೇದ್ದವರು ಕೂಡಿ ಬಂದು ಚಾಸಾ 1 ನೆದ್ದವರ ಮೋಟಾರ ಸೈಕಲ ಮುಂದುಗಡೆ ಬಂದು ನಿಂತು ತಡೆದು ನಿಲ್ಲಿಸಿದ್ದು ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. 341 ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಎರಡನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರೆಲ್ಲರೂ ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಚಾಸಾ 1 ರವರನ್ನು ತಡೆದು ನಿಲ್ಲಿಸಿ ನೀನು ನಮ್ಮ ಹೊಲದಲ್ಲಿ ತೊಗರಿ ರಾಶಿ ಯಾಕೆ ಮಾಡುತ್ತಿದ್ದಿ ಅಂತಾ ಜಗಳ ತೆಗೆದು ಆರೋಪಿ 1 ನೆದ್ದವನು ಚಾಸಾ 1 ನೇದ್ದವನಿಗೆ ಕೈಯಿಂದ ತಲೆಗೆ ಹೊಡೆದಿದ್ದು ಆ ಮೂಲಕ ಭಾ.ದಂ.ಸಂ. 323 ಸಂಗಡ 34 ರಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೂರನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ

ನೀವು ನಿಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಆರೋಪಿ 2 ನೇದ್ದವರು ಚಾಸಾ 1 ನೇದ್ದವನಿಗೆ ಬಡಿಗೆಯಿಂದ ಬಲಭುಜಕ್ಕೆ ಹೊಡೆದು ಗುಪ್ತಗಾಯ ಪಡಿಸಿದ್ದು ಆ ಮೂಲಕ ಭಾ.ದಂ.ಸಂ. 324 ರ ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ನಾಲ್ಕನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವ ಸಲುವಾಗಿ ಆರೋಪಿ ನಂ.1 ಮತ್ತು 2 ನೇದ್ದವರು , ಚಾಸಾ 1 ನೇದ್ದವರನ್ನು ತಡೆದು ನಿಲ್ಲಿಸಿ ಭೋಸಡಿ ಮಗನೇ ಎಂದು ಬೈದಿದ್ದು ಹಾಗೂ ಚಾಸಾ 4 ನೆದ್ದವನು ಜಗಳ ಬಿಡಿಸಲು ಬಂದಾಗ ಆರೋಪಿತರು ಅವನಿಗೂ ಭೊಸಡಿ ಮಗನೇ ನೀನು ಬಡಿಸಲು ಬರುತ್ತಿ ಅಂತಾ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ಶಾಂತತೆಗೆ ಭಂಗ ಉಂಟು ಮಾಡಿರುತ್ತಾರೆ ಆ ಮೂಲಕ ಭಾ.ದಂ.ಸಂ. 504 ರ ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕೊನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವ ಸಲುವಾಗಿ ಆರೋಪಿತರು ಚಾಸಾ 1 ನೇದ್ದವನಿಗೆ ಭೋಸಡಿ ಮಗನೆ ನೀನು ಇನ್ನೊಮ್ಮೆ ನಮ್ಮ ಹೊಲದಲ್ಲಿ ಕಾಲು ಇಟ್ಟರೆ ನಿನಗೆ ಜೀವಂತ ಬಿಡುವುದಿಲ್ಲಾ ಹೊಡೆದು ಕೊಲೆ ಮಾಡುತ್ತೇವೆ ಅಂತಾ ಜೀವದ ಬೆದರಿಕೆ ಹಾಕಿ ಹೋಗಿದ್ದು ಆ ಮೂಲಕ ಭಾ.ದಂ.ಸಂ. 506 ರ ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 07-12-2024 ಪ್ರ.ದ.ನ್ಯಾದಂ. ಸೇಡಂ.

## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.

**ಸಿಸಿ ನಂ.213/2020**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿ ನಂ.1ಃ ಅಶೋಕ ತಂದೆ ವೆಂಕಟಪ್ಪಾ ಮುನ್ನೂರ
ವಃ 20 ವರ್ಷ, ಉಃ ಒಕ್ಕಲುತನ
ಸಾಃ ದುಗನೂರ ಗ್ರಾಮ, ತಾಃ ಸೇಡಂ ಹಾಗೂ ಇತರರು

**ಆರೋಪಿತರ ಹೇಳಿಕೆ**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ ಆ.1

ಆ-2

ಪ್ರಃ-2) ನಿನ್ನ ತಪ್ಪನ್ನು ಒಪ್ಪಿಕೊಳ್ಳುತ್ತಿಯೋ ಅಥವಾ ವಿಚಾರಣೆ ನಡೆಯಬೇಕಾ?

ಉಃ ಆ.1

ಆ-2

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕ 7-12-2024 ಪ್ರ.ದ.ನ್ಯಾದಂ. ಸೇಡಂ.